**ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ ಸಂಖ್ಯೆ 485/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಮಹೇಶ್ ಕುಮಾರ್ | ಪ್ರಮಾಣ ಮಾಡಿದ ದಿನಾಂಕಃ 14.07.2026 |
| ತಂದೆ ಹೆಸರು | | ಲೇಟ್ ಜಿ.ಎಸ್.ರಾಜು | |
| ವಯಸ್ಸು | | 55 ವರ್ಷ | |
| ವೃತ್ತಿ | | ಎ.ಎಸ್.ಐ | ಚಾಸಾ: 17 |
| ವಾಸಸ್ಥಳ | | ಬೇಗೂರು | ಫ್ರಾಸಾ: 07 |

**ದಿನಾಂಕಃ** 14.07.2026 **ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ**

ದಿಃ 01.08.2021 ರಿಂದ ಇಲ್ಲಿಯವರೆಗೆ ಬೇಗೂರು ಪೊಲೀಸ್ ಠಾಣೆಯಲ್ಲಿ ಎಎಸ್‌ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 03.11.2024 ರಂದು ನಾನು ಠಾಣಾ ಪ್ರಬರದಲ್ಲಿದ್ದಾಗ ಬೆಳಿಗ್ಗೆ 7.30 ರ ಸಮಯಕ್ಕೆ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ಕಂಪ್ಯೂಟರ್ ಮುದ್ರಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 177/2024 ರಂತೆ ಕಲಂ.281, 106(1) ಬಿ.ಎನ್.ಎಸ್ ರೀತ್ಯಾ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮೇಲಾಧಿಕಾರಿಗಳಿಗೂ ಘನ ನ್ಯಾಯಾಲಯಕ್ಕೂ ನೀವೇದಿಸಿಕೊಂಡಿರುತ್ತೇನೆ. ಪ್ರಕರಣದ ಹೆಚ್ಚಿನ ತನಿಖೆಗಾಗಿ ಚಾಸಾ–18 ರವರಿಗೆ ಕಡತವನ್ನು ವರ್ಗಾಹಿಸಿರುತ್ತೇನೆ. ಸಾಕ್ಷಿಯು ನಿಪಿ9 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ18(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ19 ಎಂದು, ಸಾಕ್ಷಿಯ ಸಹಿಯನ್ನು ನಿಪಿ19(ಎ) ಎಂದು ಗುರ್ತಿಸಲಾಯಿತು.

**<u>ಪಾಟೀ ಸವಾಲು:  ಆರೋಪಿ ಪರ ವಕೀಲರಿಂದಃ</u>**

ಈ ಪ್ರಕರಣಕ್ಕೂ ಆರೋಪಿಗೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಚಾಸಾ–1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಪ್ರಕರಣ ದಾಖಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಸಹಿ ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ